ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಹಾವೇರಿ, ಧಾರವಾಡ, ಗದಗ ಜಿಲ್ಲೆಯ ಖಾಸಗಿ ಮಾಲೀಕತ್ವದ ಜಾಗಗಳಲ್ಲಿರುವ ಕೊಳಗೆರೆ ಪ್ರದೇಶದ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1060 (1200) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳಲ್ಲಿರುವ ಕೊಳಗೇರಿ ಪ್ರದೇಶಗಳ ಸಂಖ್ಯೆ ಎಷ್ಟು;

(ಆ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳಲ್ಲಿ ವಾಸಿಸುತ್ತಿರುವ ಒಟ್ಟು ಕೊಳಚೆ ಪ್ರದೇಶಗಳ ನಿವಾಸಿ ಕುಟುಂಬಗಳು ಹಾಗೂ ಜನ ಸಂಖ್ಯೆ ಎಷ್ಟು;

(ಇ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳನ್ನು ಕೊಳಗೇರಿ ಪ್ರದೇಶ ಅಭಿವೃದ್ಧಿ ಮಂಡಳಿಯ ವಶಕ್ಕೆ ಪಡೆದುಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಈ) ಹಾವೇರಿ, ಧಾರವಾಡ ಹಾಗೂ ಗದಗ ಜಿಲ್ಲೆಗಳಲ್ಲಿ, ಖಾಸಗಿ ಮಾಲೀಕತ್ವದ ಜಾಗಗಳನ್ನು ಕೊಳಗೇರಿ ಪ್ರದೇಶ ಅಭಿವೃದ್ಧಿ ಮಂಡಳಿಯ ವಶಕ್ಕೆ ಪಡೆದುಕೊಂಡು, ಸದರಿ ಜಾಗದಲ್ಲಿ ವಾಸವಿರುವ ನಿವಾಸಿಗಳಿಗೆ ಕ್ರಯಪತ್ರ/ಹಕ್ಕುಪತ್ರ ನೀಡಲು ಸರ್ಕಾರ ಮುಂದಾಗಬಹುದೇ; ಇದಕ್ಕೆ ಬೇಕಾಗುವ ಕಾಲಾವಕಾಶವೆಷ್ಟು?